(ಈ ಹಂತದಲ್ಲಿ ಕಾಂಗ್ರೆಸ್ (ಐ) ಪಕ್ಷದ ಎಲ್ಲ ಸದಸ್ಯರೂ ಘೋಷಣೆಗಳನ್ನು ಕೂಗುತ್ತಿದ್ದರು)

ಅಧ್ಯಕ್ಷರು.—ಈಗ ಮಾನ್ಯ ಮುಖ್ಯ ಮಂತ್ರಿಯವರು ರಾಜ್ಯಪಾಲರ ಭಾಷಣದ ವಂದನಾ ನಿರ್ಣಯಕ್ಕೆ ಉತ್ತರವನ್ನು ನೀಡುತ್ತಾರೆ. ದಯವಿಟ್ಟು ಮಾನ್ಯ ಸದಸ್ಯರೆಲ್ಲರೂ ತಮ್ಮ ತಮ್ಮ ಸ್ಥಾನಗಳಿಗೆ ತೆರಳಬೇಕೆಂದು ಕೇಳಿಕೊಳ್ಳುತ್ತೇನೆ.

(ಗೊಂದಲ)

(ಧರಣಿ ಕುಳಿತ ಸದಸ್ಯರು ಅಲ್ಲೇ ಕುಳಿತು ಘೋಷಣೆಗಳನ್ನು ಕೂಗುತ್ತಿದ್ದರು.)

ಶ್ರೀ ಆರ್. ವೆಂಕಟರಾಮಯ್ಯ.—ನೀವು ಯಾವುದಾದರೂ ಒಂದು ಎನ್‌ಕ್ವೈರಿಗೆ ಒಪ್ಪಿಕೊಳ್ಳಿ, ಇಲ್ಲದಿದ್ದರೆ ನಾವೂ ಕೂಡ ವಾಕೌಟ್ ಮಾಡುತ್ತೇವೆ.

ಶ್ರೀ ಎಂ. ಎಸ್. ಕೃಷ್ಣನ್.—ಸಿ.ಬಿ.ಐ, ಎನ್‌ಕ್ವೈರಿ ಮಾಡದಿದ್ದಲ್ಲಿ ಯಾವುದಾದರೂ ಎನ್‌ಕ್ವೈರಿ ಮಾಡಿಸಿ. ಜ್ಯುಡಿಷಿಯಲ್ ಎನ್‌ಕ್ವೈರಿಯಾದರೂ ಮಾಡಿಸಿ.

(ಗೊಂದಲ)

ಅಧ್ಯಕ್ಷರು.—ಮಾನ್ಯ ರಾಜ್ಯಪಾಲರ ಭಾಷಣಕ್ಕೆ ಈಗ ಮಾನ್ಯ ಮುಖ್ಯ ಮಂತ್ರಿಗಳು ಉತ್ತರವನ್ನು ಕೊಡುತ್ತಾರೆ.....

(ಗೊಂದಲ)

(ಈ ಸಂದರ್ಭದಲ್ಲಿ ಸಿ.ಬಿ. ಐ. ಮತ್ತು ಸಿ.ಪಿ.ಐ ಸದಸ್ಯರಾದ ಮಾನ್ಯ ಆರ್. ವೆಂಕಟರಾಮಯ್ಯ, ಮಾನ್ಯ ಟಿ. ಎಸ್. ಮಣಿ ಮತ್ತು ಮಾನ್ಯ ಎಂ. ಎಸ್ ಕೃಷ್ಣನ್ ರವರು ಸಭಾತ್ಯಾಗವನ್ನು ಮಾಡಿದರು)

ಶ್ರೀ ಎಸ್. ಆರ್. ಬೊಮ್ಮಾಯಿ.—ಸಂಸದೀಯ ಸತ್ಸಂಪ್ರದಾಯಗಳನ್ನು ತಾವು ಕಾಯಬೇಕಾಗಿ ಮತ್ತೊಮ್ಮೆ ನಿಮ್ಮಲ್ಲಿ ಅತ್ಯಂತ ವಿನಯದಿಂದ ಮನವಿ ಮಾಡಿಕೊಳ್ಳುತ್ತೇನೆ. ದಯವಿಟ್ಟು ಎಲ್ಲರೂ ತಮ್ಮ ತಮ್ಮ ಸ್ಥಾನಗಳಿಗೆ ಹೋಗಿ ಕುಳಿತುಕೊಳ್ಳಿ,

(ಮಾನ್ಯ ಕಾಂಗ್ರೆಸ್ (ಐ) ಸದಸ್ಯರು ಬೇಕೇ ಬೇಕು ಸಿ.ಬಿ.ಐ. ಎನ್‌ಕ್ವೈರಿ, ಉತ್ತರ ಬೇಕಾಗಿಲ್ಲ ಎಂದು ಕೂಗುತ್ತಿದ್ದರು)

(ಗೊಂದಲ)

ಅಧ್ಯಕ್ಷರು.—ಮಾನ್ಯ ಮುಖ್ಯ ಮಂತ್ರಿಗಳೆ, ತಾವು ಮಾನ್ಯ ರಾಜ್ಯಪಾಲರ ಭಾಷಣದ ಮೇಲಿನ ವಂದನಾ ನಿರ್ಣಯಕ್ಕೆ ಉತ್ತರವನ್ನು ಹೇಳಿ.

ಶ್ರೀ ಎಸ್. ಆರ್. ಬೊಮ್ಮಾಯಿ.—ಮಾನ್ಯ ರಾಜ್ಯಪಾಲರ ಭಾಷಣದಲ್ಲಿ ಸರ್ಕಾರದ ಧ್ಯೇಯ ಧೋರಣೆಗಳನ್ನು ಸ್ಪಷ್ಟವಾಗಿ ಹೇಳಿದ್ದೇವೆ. ಇಲ್ಲಿ ಮಾನ್ಯ ಸದಸ್ಯರು ಅದಕ್ಕೆಲ್ಲಾ ಉತ್ತರಗಳನ್ನು ಬಯಸುವುದಿಲ್ಲ. ಆದ್ದರಿಂದ ಮಾನ್ಯ ರಾಜ್ಯಪಾಲರ ಭಾಷಣದ ಮೇಲೆ ಅಭಿನಂದನಾ ನಿರ್ಣಯದ ಪ್ರಸ್ತಾವನೆಯನ್ನು ಮುಂತಕ್ಕೆ ಹಾಕಬೇಕೆಂದು ಕೇಳಿಕೊಳ್ಳುತ್ತೇನೆ.